# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1958(2237)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ವಿಷಯ : ಶಾಸಕರುಗಳಿಗೆ ನೀಡಿದ ಫಾಸ್ಟ್ ಟ್ಯಾಗ್ (Fast Tag) ಕಾರ್ಯನಿರ್ವಹಿಸದೆ ಇರುವ ಕುರಿತು

(ಅ) ಟೋಲ್‌ಗೇಟ್‌ಗಳಲ್ಲಿ ಫಾಸ್ಟ್ ಟ್ಯಾಗ್ (Fast Tag) ಕಡ್ಡಾಯ ಮಾಡಿದ ನಂತರ ಮಾನ್ಯ ಶಾಸಕರುಗಳಿಗೆ ನೀಡಿದ ಫಾಸ್ಟ್‌ಟ್ಯಾಗ್ ಕಾರ್ಯನಿರ್ವಹಿಸುತ್ತಿಲ್ಲದ್ದರಿಂದ ಮಾನ್ಯ ಶಾಸಕರುಗಳ ವಾಹನಗಳಿಗೆ ಪ್ರವೇಶ ನಿರಾಕರಿಸುತ್ತಿರುವುದು ಮತ್ತು ಇದರಿಂದಾಗಿ ಶಾಸಕರುಗಳಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಈ ಕುರಿತು ಟೋಲ್‌ಗೇಟ್‌ಗಳಿಗೆ ಅಥವಾ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲಾಗಿದೆಯೇ; ನೀಡಿದ್ದಲ್ಲಿ, ಸದರಿ ಆದೇಶದ ಪ್ರತಿ ನೀಡುವುದು;

(ಈ) ಸರ್ಕಾರಿ ಅಧಿಕಾರಿಗಳಿಗೆ Fast Tag ವಿತರಿಸುವ ಆಲೋಚನೆ ಸರ್ಕಾರದ ಮುಂದಿದೆಯೇ; ಯಾವ ದರ್ಜೆಯ ಅಧಿಕಾರಿಗಳಿಗೆ Fast Tag ವಿತರಿಸಲಾಗುತ್ತಿದೆ? (ವಿವರ ನೀಡುವುದು)